(ಇಂದು ದಿನಾಂಕಃ **30-07-2025** ರಂದು ಸಾಕ್ಷಿಯನ್ನು ತೆರೆದ ನ್ಯಾಯಾಲಯಕ್ಕೆ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.)

**ಮುಂದುವರೆದ ಪಾಟೀ ಸವಾಲುಃ ಶ್ರೀ ಆರ್ ಎಂ ಆರ್ ವಕೀಲರಿಂದಃ**

ಕಲ್ಲಪ್ಪ ಬಸಪ್ಪ ಶಾನವಾಡ ರವರು ನನ್ನ ಅಣ್ಣ. ನಿಪಿ-5 ನನ್ನ ಅಣ್ಣನ ಹೆಸರಿನಲ್ಲಿರುತ್ತದೆ ಎಂದರೆ ಸರಿ. ಆರೋಪಿ ನನಗೆ ವೈಯಕ್ತಿಕವಾಗಿ ಒಪ್ಪಿಗೆ ಪತ್ರ ಬರೆದುಕೊಟ್ಟಿಲ್ಲ ಎಂದರೆ ಸರಿ. ಸಾಕ್ಷಿಯು ಮುಂದುವರೆದು ನನಗೆ, ನನ್ನ ಅಣ್ಣ ಹಾಗೂ ತಂದೆಗೆ ಸೇರಿ ಬರೆದುಕೊಟ್ಟಿರುತ್ತಾರೆ ಎಂದು ನುಡಿದಿರುತ್ತಾರೆ. ನಿಪಿ-5 ರಲ್ಲಿ ನಮ್ಮ ಮೂವರ ಹೆಸರು ನಮೂದಿಲ್ಲ ಎಂದರೆ ಸರಿಯಲ್ಲ. ನಿಪಿ-5 ರ ಸಾಕ್ಷಿದಾರರ ಪಟ್ಟಿಯಲ್ಲಿ ಮೊದಲನೇದವರ ಸಹಿ ಯಾರದು ಎಂದು ಹೇಳಲಾಗುವುದಿಲ್ಲ. ನಿಪಿ-5 ನ್ನು ಪ್ರಕರಣಕ್ಕಾಗಿ ಸೃಷ್ಠಿ ಮಾಡಿ ಹಾಜರು ಪಡಿಸಿರುತ್ತೇನೆ ಎಂದರೆ ಸರಿಯಲ್ಲ. ನಿಪಿ-5 ನ್ನು ಬರೆಯುವ ವೇಳೆ ನಾನೂ ಸಹ ಹಾಜರಿದ್ದೇನು. ಸದರಿ ನಿಪಿ-5 ನ್ನು ಆರೋಪಿಯೇ ಬರೆದು ತಂದು ಕೊಟ್ಟಿರುತ್ತಾನೆ. ಸದರಿ ಅಂಶವನ್ನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

**ಓ. ಹೇ. ಕೇ. ಸರಿ. ಇದೆ.**

**Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ**
**ನವಲಗುಂದ.**